ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	284
2	ಸದಸ್ಯರ ಹೆಸರು	:	ಶ್ರೀ ಮುನಿರಾಜುಗೌಡ. ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)
3	ಉತ್ತರಿಸುವ ದಿನಾಂಕ	:	17-02-2022
4	ಉತ್ತರಿಸುವವರು	:	ಮಾನ್ಯ ಮುಖ್ಯಮಂತ್ರಿಗಳು

ಕ್ರಸಂ	ಪ್ರಶ್ನೆ	ಉತ್ತರ
ಅ)	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ (C&R Rules) ಪ್ರಕಾರ ಮಂಜೂರಾಗಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳ ಸಂಖ್ಯೆ ಎಷ್ಟು;	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ (C&R Rules) ಪ್ರಕಾರ 361 ಸಹಾಯಕ ಅಭಿಯಂತರರ ಹುದ್ದೆಗಳು ಹಾಗೂ 108 ಕಿರಿಯ ಅಬಿಯಂತರರ ಹುದ್ದೆಗಳು ಮಂಜೂರಾಗಿರುತ್ತದೆ.
ಆ)	ಹಾಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು;	ಪಾಲಿಕೆಯಲ್ಲಿ 265 ಸಹಾಯಕ ಅಭಿಯಂತರರು ಮತ್ತು 67 ಕಿರಿಯ ಅಭಿಯಂತರರು ಕಾರ್ಯ ನಿರ್ವಹಿಸುತ್ತಿದ್ದಾರೆ.
ಇ)	ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇವೆಗೆ ಸೇರಿದವರ ಸಂಖ್ಯೆ ಎಷ್ಟು; ಎರವಲು ಸೇವೆ ಮೇರೆಗೆ ನಿಯೋಜಿಸಲ್ಪಟ್ಟವರ ಸಂಖ್ಯೆ ಎಷ್ಟು;	ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇವೆಗೆ ಸೇರಿದವರ ಸಂಖ್ಯೆ ಹಾಗೂ ಎರವಲು ಸೇವೆ ಮೇರೆಗೆ ನಿಯೋಜಿಸಲ್ಪಟ್ಟವರ ಸಂಖ್ಯೆಯ **ವಿವರಗಳನ್ನು ಅನುಬಂಧ-1 ರಲ್ಲಿ ನೀಡಿದೆ.**
ಈ)	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮೂಲ ಆಡಳಿತಾತ್ಮಕ ಘಟಕವಾದ ವಾರ್ಡ್ ಮಟ್ಟದಲ್ಲಿ ಕಾಮಗಾರಿಗಳ ಅನುಷ್ಠಾನದ ಮೇಲುಸ್ತುವಾರಿ ವಹಿಸಬೇಕಾದ ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್‌ಗಳ ಹುದ್ದೆಗಳು ಗಣನೀಯ ಸಂಖ್ಯೆಯಲ್ಲಿ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು,

ಉ)	ಬಂದಿದ್ದಲ್ಲಿ, ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮ ಏನು?	ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದೊಡನೆ ಪತ್ರ ವ್ಯವಹರಣೆ ನಡೆಸಲಾಗುತ್ತಿರುತ್ತದೆ ಹಾಗೂ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಕಡತ ಸಂಖ್ಯೆ: ನಅಇ 213 ಎಂಎನ್‌ಜಿ 2021, ದಿನಾಂಕ: 04-01-2022ರ ಪತ್ರದನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅವಶ್ಯವಿರುವ /ಖಾಲಿ ಇರುವ ಸಹಾಯಕ ಅಭಿಯಂತರರು/ಕಿರಿಯ ಅಭಿಯಂತರರ (ಸಿವಿಲ್) ಹುದ್ದೆಗಳ ಸೇವೆಯನ್ನು ಕಿಯೋನಿಕ್ಸ್ ಸಂಸ್ಥೆಯಿಂದ 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಸೇವೆಯನ್ನು ಪಡೆಯಲು ಅನುಮತಿ ನೀಡಿದ್ದು, ಈ ಸಂಬಂಧ ಕ್ರಮ ವಹಿಸಲಾಗುತ್ತಿರುತ್ತದೆ ಹಾಗೂ ಖಾಲಿ ಇರುವ ಸಹಾಯಕ/ ಕಿರಿಯ ಅಭಿಯಂತರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಅಇ 83 ಎಂಎನ್‌ಯು 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

ಅನುಬಂಧ-1

ಕ್ರಮ ಸಂಖ್ಯೆ	ಹುದ್ದೆಗಳ ವಿವರ	ಮಂಜೂರಾಗಿರುವ ಹುದ್ದೆಗಳ ಸಂಖ್ಯೆ	ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ		ಒಟ್ಟು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ	ಖಾಲಿ ಇರುವ ಹುದ್ದೆಗಳ ಸಂಖ್ಯೆ
			ಬಿ.ಬಿ.ಎಂ.ಪಿ	ಎರವಲು		
01	ಸಹಾಯಕ ಅಭಿಯಂತರರು (ಸಿವಿಲ್) ವಿಭಾಗ-1	291	93	145	238	53
02	ಸಹಾಯಕ ಅಭಿಯಂತರರು (ಸಿವಿಲ್) ವಿಭಾಗ-2	70	27	00	27	43
	ಒಟ್ಟು	**361**	**120**	**145**	**265**	**96**
03	ಕಿರಿಯ ಅಭಿಯಂತರರು (ಸಿವಿಲ್)	108	11	56	67	41